RNU AIR DHARWAD

# MARCH 4,2025
# ALL INDIA RADIO- DHARWAD
# PRADESH SAMACHARA (KANNADA) 12PM

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

**ಓದಿದವವರು: ವಿವೇಕಾದಿತ್ಯ ಕನಿಯಾಲ**

<><><>

ರಾಜ್ಯದಲ್ಲಿ ಮಾನವ– ವನ್ಯಜೀವಿ ಸಂಘರ್ಷ ತಗ್ಗಿಸಲು ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಆನೆಗಳ ಚಲನವಲನಗಳ ಮೇಲೆ ನಿಗಾ ಇಡಲು ಹಾಸನದಲ್ಲಿ ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಖಾತೆ ಸಚಿವ ಈಶ್ವರ ಖಂಡ್ರೆ ಹೇಳಿದರು. ಕೊಡಗು ಹಾಗೂ ಹಾಸನ ಜಿಲ್ಲೆಗಳಲ್ಲಿ ಆನೆಗಳ ಸಂಖ್ಯೆ ಹೆಚ್ಚಿದ್ದು, ಕಾಡಾನೆ ಹಾವಳಿ ತಪ್ಪಿಸಿ, ಶಾಶ್ವತ ಪರಿಹಾರ ಒದಗಿಸಲು ಸರ್ಕಾರವು ಬದ್ಧವಾಗಿದೆ ಎಂದರು. ಬೇಲೂರು ತಾಲೂಕು ಬಿಕ್ಕೋಡು ಗ್ರಾಮದ ಗುಜ್ಜನಹಳ್ಳಿಯಲ್ಲಿ, ಇತ್ತೀಚೆಗೆ ಕಾಡಾನೆ ದಾಳಿಯಿಂದ ಮೃತಪಟ್ಟ ಅನಿಲ್ ಮನೆಗೆ ಭೇಟಿ ನೀಡಿ, ಕುಟುಂಬ ಸದಸ್ಯರಿಗೆ ಸಚಿವರು ಸಾಂತ್ವನ ಹೇಳಿದರು.

<><><>

ಸಮಾಜಮುಖಿ ಕಾರ್ಯಗಳ ಮೂಲಕ ಗುರುತಿಸಿಕೊಂಡಿರುವ, ಸೇವಾ ಭಾರತಿ ಟ್ರಸ್ಟ್ 25 ವರ್ಷ ಪೂರ್ಣಗೊಳಿಸುತ್ತಿರುವ ಹಿನ್ನೆಲೆಯಲ್ಲಿ, ರಜತ ಸಂಭ್ರಮ ಕಾರ್ಯಕ್ರಮವನ್ನು ನಾಳೆ ಹುಬ್ಬಳ್ಳಿಯಲ್ಲಿ ಆಯೋಜಿಸಲಾಗಿದೆ. ಬೆಳಗಾವಿಯ ಕಿಶೋರಿ ವಿಕಾಸ ಕೇಂದ್ರ ಹಾಗೂ ಹುಬ್ಬಳ್ಳಿ ಬಾಲಕಲ್ಯಾಣ ಕೇಂದ್ರದ ವಿದ್ಯಾರ್ಥಿನಿಯರಿಂದ, ಅಹಲ್ಯಾಬಾಯಿ ಹೋಳ್ಕರ್ ಹಾಗೂ ಕಿತ್ತೂರರಾಣಿ ಚನ್ನಮ್ಮನ ರೂಪಕಗಳು ಪ್ರದರ್ಶನಗೊಳ್ಳಲಿವೆ. ಸೇವಾ ಭಾರತಿ ಸಂಘಟನೆಯ ಸಮಾಜಮುಖಿ ಕಾರ್ಯಗಳ ಬಗ್ಗೆ ಪ್ರದೇಶ ಸಮಾಚಾರಕ್ಕೆ ಮಾಹಿತಿ ನೀಡಿದ್ದಾರೆ, ಸೇವಾ ಭಾರತಿ ಟ್ರಸ್ಟ್ ಕಾರ್ಯದರ್ಶಿ ಡಾಕ್ಟರ್ ರಘು ಅಕಮಂಚಿ ಅವರು.

<><><>

ಬೈಟ್: ಡಾಕ್ಟರ್ ರಘು ಅಕಮಂಚಿ 35 ಸೆಕೆಂದುಗಳು

<><><>

ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ, ರಾಜ್ಯಾದ್ಯಂತ, ವರ್ಷಾಂತ್ಯದ ತಿರುವಳಿ ಮಾರಾಟದ ಅಂಗವಾಗಿ, ಚರ್ಮದ ಎಲ್ಲ ವಸ್ತುಗಳ ಮೇಲೆ, ಶೇಕಡ 20 ರಿಂದ 30 ರಷ್ಟು ರಿಯಾಯಿತಿ ದರದಲ್ಲಿ, ಈ ತಿಂಗಳ 23ರ ವರೆಗೆ ಮಾರಾಟ ಮೇಳ ಆಯೋಜಿಸಿದೆ. ಹುಬ್ಬಳ್ಳಿಯ ಐ.ಟಿ. ಪಾರ್ಕ್ ನಲ್ಲಿರುವ, ಲಿಡ್ಕರ್ ಮಾರಾಟ ಮಳಿಗೆಯಲ್ಲಿ, ಮಾರಾಟ ಮೇಳ ಆಯೋಜಿಸಿದೆ ಎಂದು, ವ್ಯವಸ್ಥಾಪಕ ವಿ.ಪಿ.ಮೊರಬ ತಿಳಿಸಿದ್ದಾರೆ. ಶಾಲಾ ಮಕ್ಕಳಿಗೆ ಹಾಗೂ ಕಾರ್ಖಾನೆಗಳಿಗೆ ಶೂಗಳನ್ನು ಸಹ ಖರೀದಿಸಬಹುದು ಎಂದು, ಅವರು ತಿಳಿಸಿದ್ದಾರೆ.

<><><>

ಕುವೆಂಪು ಭಾಷಾ ಭಾರತಿ ಪ್ರಾಧಿಕಾರದ ವಾರ್ಷಿಕ ಗೌರವ ಪ್ರಶಸ್ತಿ ಹಾಗೂ ಪುಸ್ತಕ ಬಹುಮಾನ ವಿಜೇತರ ಪಟ್ಟಿಯನ್ನು ಪ್ರಾಧಿಕಾರದ ಅಧ್ಯಕ್ಷ ಡಾಕ್ಟರ್ ಚನ್ನಪ್ಪ ಕಟ್ಟಿ ಪ್ರಕಟಿಸಿದರು. 2023 ಹಾಗೂ 2024 ನೇ ಸಾಲಿನ ಗೌರವ ಪ್ರಶಸ್ತಿಯನ್ನು ಅನುವಾದ ಕ್ಷೇತ್ರದಲ್ಲಿ ಸಾಧನೆ ಮಾಡಿದ 10 ಸಾಧಕರಿಗೆ, 2022 ಹಾಗೂ 2023 ನೇ ಸಾಲಿನ 10 ಅತ್ಯುತ್ತಮ ಅನುವಾದ ಪುಸ್ತಕಗಳ ಲೇಖಕರಿಗೆ ಪುಸ್ತಕ ಬಹುಮಾನ ಹಾಗೂ ಐದು ಪ್ರಕಾರಗಳಲ್ಲಿ ಅತ್ಯುತ್ತಮ ಪುಸ್ತಕಗಳ ಲೇಖಕರಿಗೆ ಬಹುಮಾನ ವಿತರಿಸಲಾಗುವುದು ಎಂದು ಅವರು ತಿಳಿಸಿದರು.

<><><>

ಪಂಡಿತ ಪುಟ್ಟರಾಜ ಗವಾಯಿಗಳು ಸಂಗೀತ ಕಲಿಸಿ, ಶಿಷ್ಯ ವೃಂದವನ್ನು ಬೆಳೆಸಿದ್ದಾರೆ. ದೇಶದ ವಿಶ್ವವಿದ್ಯಾಲಯಗಳು ಮಾಡಲಾಗದ ಮಹೋನ್ನತ ಕೆಲಸವನ್ನು ಅವರು ಮಾಡಿದ್ದಾರೆ ಎಂದು ಸಿತಾರರತ್ನ ಸಮಿತಿ ಅಧ್ಯಕ್ಷ ರಾಘವೇಂದ್ರ ಆಯಿ ಹೇಳಿದರು. ಧಾರವಾಡದ ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಆಯೋಜಿಸಲಾದ ಪುಟ್ಟರಾಜ ಗವಾಯಿಗಳ 111ನೇ ಜನ್ಮದಿನದ ಅಂಗವಾಗಿ ಪುಟ್ಟರಾಜ ಸಮ್ಮಾನ -2025 ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು. ಗಾಯಕ ಪಂಡಿತ್ ಗಣಪತಿ ಭಟ್ ಹಾಸಣಗಿ ಅವರಿಗೆ ಪುಟ್ಟರಾಜ ಸಮ್ಮಾನ 2025 ಪ್ರಶಸ್ತಿ ಪ್ರದಾನ ಮಾಡಲಾಯಿತು.

<><><>

ಇಂದು ಸಂಜೆ 5 ಗಂಟೆಗೆ, ಆಲೂರು ವೆಂಕಟರಾವ್ ಸಾಂಸ್ಕೃತಿಕ ಭವನದಲ್ಲಿ ಪಂಡಿತ್ ಶಂಕ್ರಪ್ಪ ಹಾಗೂ ಭೀಮಾಬಾಯಿ ಹೂಗಾರ್ ಅವರ 40 ನೇ ಪುಣ್ಯಸ್ಮರಣೋತ್ಸವ ಕಾರ್ಯಕ್ರಮ ಜರುಗಲಿದೆ. ಸ್ತ್ರೀರೋಗ ತಜ್ಞೆ ಡಾಕ್ಟರ್ ಸೌಭಾಗ್ಯ ಕುಲಕರ್ಣಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಸಂಗೀತ ಕಾರ್ಯಕ್ರಮ ಜರುಗಲಿದೆ.

<><><>

ಕನಿ ್ಠ ಬೆಂಬಲ ಬೆಲೆ ಯೋಜನೆಯಡಿ, ರೈತರಿಂದ ಖರೀದಿಸುವ ಆಹಾರ ಧಾನ್ಯಗಳ ಗುಣಮಟ್ಟ ಕಾಪಾಡುವಂತೆ, ಆಹಾರ ಮತ್ತು ನಾಗರಿಕ ಸರಬರಾಜು ಖಾತೆ ಸಚಿವ ಕೆ.ಎಚ್. ಮುನಿಯಪ್ಪ ಕಟ್ಟುನಿಟ್ಟಿನ ನಿರ್ದೇಶನ ನೀಡಿದ್ದಾರೆ. ವಿಧಾನಸೌಧದಲ್ಲಿ, ಜಿಲ್ಲೆಯ ಆಹಾರ ನಿಗಮ ಮತ್ತು ಗೊದಾಮು ವ್ಯವಸ್ಥಾಪಕ ನಿರ್ದೇಶಕರು ಹಾಗೂ ಖರೀದಿ ಏಜನ್ಸಿಗಳ ಮುಖ್ಯಸ್ಥರೊಂದಿಗೆ, ಸಚಿವರು ವಿಡಿಯೋ ಸಂವಾದ, ನಡೆಸಿದರು. ಪ್ರತಿ ಜಿಲ್ಲೆಯ ಜಿಲ್ಲಾಧಿಕಾರಿಯೇ ಬೆಂಬಲ ಬೆಲೆ ಯೋಜನೆ ಅಧ್ಯಕ್ಷರಾಗಿದ್ದು, ತೂಕದಲ್ಲಿ ವ್ಯತ್ಯಾಸ, ಸಂಗ್ರಹಿತ ಆಹಾರ ಧಾನ್ಯಗಳ ಗುಣಮಟ್ಟದಲ್ಲಿ ಸಮಸ್ಯೆ ಕಂಡುಬಂದಲ್ಲಿ, ಕೂಡಲೇ ಕ್ರಮ ಕೈಗೊಳ್ಳುವಂತೆ, ಸೂಚಿಸಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಬರುವ 8 ನೇ ತಾರೀಖಿನಂದು ಕಲಬುರಗಿಯ ಜೇವರ್ಗಿಯಲ್ಲಿ, ಕಲ್ಯಾಣ ಕರ್ನಾಟಕದ ಗ್ರಾಮೀಣ ರಸ್ತೆ ನಿರ್ಮಾಣ ಯೋಜನೆ 'ಕಲ್ಯಾಣ ಪಥ' ಕ್ಕೆ ಚಾಲನೆ ನೀಡಲಿದ್ದಾರೆ. ಒಟ್ಟು 1 ಸಾವಿರದ 150 ಕೋಟಿ ರೂಪಾಯಿ ವೆಚ್ಚದಲ್ಲಿ ಈ ಯೋಜನೆ ಜಾರಿಗೊಳ್ಳಲಿದೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..